## 55. ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಸಿದ್ಧತೆ

ಕೊರೊನಾ ಲಾಕ್‌ಡೌನ್‌ನಿಂದ ಮುಂದೂಡಿಕೆಯಾಗಿದ್ದ ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳನ್ನು ನಡೆಸಲು ಸಿದ್ಧತೆ ಶುರು ಮಾಡುವಂತೆ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ಸಚಿವ ಎಸ್.ಸುರೇಶ್ ಕುಮಾರ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ರಾಜ್ಯದ ಎಲ್ಲಾ ಜಿಲ್ಲೆಗಳ ಶೈಕ್ಷಣಿಕ ಉಪನಿರ್ದೇಶಕರೊಂದಿಗೆ ವಿಡಿಯೋ ಸಂವಾದವನ್ನು ಸಚಿವರು ನಡೆಸಿ ಈ ಸೂಚನೆ ನೀಡಿದ್ದಾರೆ. ಎಲ್ಲ ಜಿಲ್ಲೆಗಳಿಂದ ಬಂದ ಒಟ್ಟಾಭಿಪ್ರಾಯದಂತೆ ಮಕ್ಕಳು ತಮ್ಮ ಪರೀಕ್ಷಾ ದಿನಾಂಕ ತಿಳಿಯಲು ಉತ್ಸುಕರಾಗಿದ್ದಾರೆ. ಜೊತೆಗೆ ತಮ್ಮ ಪರಿಶ್ರಮದ ಆಧಾರದಲ್ಲಿ ಪರೀಕ್ಷಾ ಫಲಿತಾಂಶವನ್ನು ಪಡೆಯಬೇಕೆಂದು ಬಯಸುತ್ತಿರುವ ಹಿನ್ನೆಲೆಯಲ್ಲಿ ಪರೀಕ್ಷಾ ಕೇಂದ್ರಗಳಲ್ಲಿ ಕೊರೊನಾ ನಂತರದ ಸಾಮಾಜಿಕ ಸ್ಥಿತಿಗತಿಗಳಿಗೆ ಅನುಗುಣವಾಗಿ ಅವಶ್ಯಕವಿರುವ ಎಲ್ಲ ಸುರಕ್ಷತಾ ಕ್ರಮಗಳನ್ನು ಅನುಸರಿಸಿ ಪರೀಕ್ಷೆಗಳನ್ನು ನಿರ್ವಹಿಸುವ ಬಗ್ಗೆ ಕೂಡಲೇ ಗಮನ ಹರಿಸಬೇಕೆಂದು ಸಚಿವರು ಸೂಚಿಸಿರುತ್ತಾರೆ.

ರಾಜ್ಯದ ಜಿಲ್ಲೆಗಳನ್ನು ಕೆಂಪು, ಕಿತ್ತಳೆ, ಹಸಿರು ಮತ್ತು ಕಂಟೈನ್‌ಮೆಂಟ್ ಪ್ರದೇಶ ಎಂದು ಗುರುತಿಸಲಾಗಿದ್ದು, ಆಯಾ ಜಿಲ್ಲೆಗಳಲ್ಲಿ ಸ್ಥಳೀಯ ಅವಶ್ಯಕತೆಗೆ ಅನುಗುಣವಾಗಿ ಕೈಗೊಳ್ಳಬೇಕಿರುವ ಪರೀಕ್ಷಾ ಸಿದ್ಧತೆ ಕುರಿತು ಅಭಿಪ್ರಾಯ ಪಡೆದರು, ಸಾಮಾಜಿಕ ಅಂತರ ಕಾಪಾಡಿಕೊಳ್ಳಬೇಕಿರುವುದರಿಂದ ವಿದ್ಯಾರ್ಥಿಗಳು ತರಗತಿಯಲ್ಲಿ ಕುಳಿತುಕೊಳ್ಳುವಲ್ಲಿ ಅಂತರವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಬೇಕೆಂದು ಹಾಗೂ ಪ್ರತಿ ಪರೀಕ್ಷಾ ಕೊಠಡಿಯಲ್ಲಿ ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳುವ ವ್ಯವಸ್ಥೆಯನ್ನು ಕಡ್ಡಾಯವಾಗಿ ಪಾಲಿಸಬೇಕೆಂದು ಆದೇಶಿಸಿದರು.

ಯಾವುದೇ ವಿದ್ಯಾರ್ಥಿಯೂ ನೆಲದ ಮೇಲಾಗಲೀ, ಬಯಲಿನಲ್ಲಾಗಲೀ ಪರೀಕ್ಷೆ ಬರೆಯಬಾರದು. ಅಗತ್ಯವಾದ ಡೆಸ್ಕ್, ಬೆಂಚ್‌ಗಳನ್ನು ಆಸುಪಾಸಿನ ಶಾಲೆಗಳಿಂದ ಸಂಗ್ರಹಿಸಿಟ್ಟುಕೊಳ್ಳಬೇಕು. ಕಂಟೈನ್ಮೆಂಟ್ ವಲಯಗಳಲ್ಲಿರುವ ಪರೀಕ್ಷಾ ಕೇಂದ್ರಗಳನ್ನು ಸುರಕ್ಷಿತ ವಲಯಗಳಿಗೆ ಸ್ಥಳಾಂತರಿಸುವುದು. ಇದಕ್ಕಾಗಿ ಪರೀಕ್ಷಾ ಉಪಕೇಂದ್ರಗಳನ್ನು ಸ್ಥಾಪಿಸುವುದು. ಕೊಠಡಿಯಲ್ಲಿ 24 ಮಕ್ಕಳ ಬದಲಿಗೆ ಕಡಿಮೆ ಮಕ್ಕಳನ್ನು ಕೂಡಿಸುವುದು. ಪ್ರತಿ ಕೇಂದ್ರದಲ್ಲಿ ಕಡ್ಡಾಯವಾಗಿ ಸಿಸಿಟಿವಿ, ವೈದ್ಯಕೀಯ ಸೌಲಭ್ಯದ ವ್ಯವಸ್ಥೆ ಮಾಡುವುದು. ಎಸ್‌ಎಸ್‌ಎಲ್‌ಸಿ ಪರೀಕ್ಷೆ ಬರೆಯಲಿರುವ ವಿದ್ಯಾರ್ಥಿಗಳಿಗೆ ಪರೀಕ್ಷಾ ಕೇಂದ್ರಕ್ಕೆ ಬಂದ ಸಂದರ್ಭದಲ್ಲಿ ಮಾಸ್ಕ್ ಸ್ಯಾನಿಟೈಜರ್‌ಗಳನ್ನು ಒದಗಿಸಬೇಕು. ಅವರನ್ನು ಥರ್ಮಲ್ ತಪಾಸಣೆಗೆ ಒಳಪಡಿಸಿ ಪರೀಕ್ಷೆಗೆ ಹಾಜರುಪಡಿಸಲು ಕ್ರಮ ಕೈಗೊಳ್ಳಬೇಕು. ಜ್ವರದ ಲಕ್ಷಣಗಳಿರುವ ವಿದ್ಯಾರ್ಥಿಗಳಿಗೆ ಪ್ರತ್ಯೇಕ ಕೊಠಡಿಯನ್ನು ವ್ಯವಸ್ಥೆ ಮಾಡುವಂತೆ ಸೂಚನೆ ನೀಡಿರುತ್ತಾರೆ. ಪರೀಕ್ಷಾ ಕೇಂದ್ರಗಳನ್ನು ಹಾಗೂ ಕೊಠಡಿಗಳನ್ನು ಹೆಚ್ಚಿಸಲು ಸ್ಥಳ ಪರಿಶೀಲನೆ ನಡೆಸಿ ಇಲಾಖಾ ಮುಖ್ಯಸ್ಥರಿಗೆ ಕೂಡಲೇ ವರದಿ ಸಲ್ಲಿಸಬೇಕೆಂದು ಸಚಿವ ಸುರೇಶ್ ಕುಮಾರ್ ಅಧಿಕಾರಿಗಳಿಗೆ ಸೂಚಿಸಿದರು.

ಆಧಾರ:ಉದಯವಾಣಿ, ದಿನಾಂಕ:05.05.2020